ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 17-08-2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಪತ್ರಿಕಾಗೋಷ್ಠಿ:<br>ಡಾ. ಬಂಜಗೆರೆ ಜಯಪ್ರಕಾಶ್,<br>ಅಧ್ಯಕ್ಷರು,<br>ಕನ್ನಡ ಪುಸ್ತಕ ಪ್ರಾಧಿಕಾರ | 18-08-2016<br>ಗುರುವಾರ<br>ಬೆಳಿಗ್ಗೆ<br>11-00 ಗಂಟೆಗೆ | ಅಂತರಂಗ,<br>ಕನ್ನಡ ಭವನ,<br>ಜೆ.ಸಿ. ರಸ್ತೆ, ಬೆಂಗಳೂರು. |
| 2. | ಪತ್ರಿಕಾಗೋಷ್ಠಿ:<br>ಹೆಚ್. ಆಂಜನೇಯ,<br>ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಖಾತೆಯ ಸಚಿವರು. | 18-08-2016<br>ಗುರುವಾರ<br>ಮಧ್ಯಾಹ್ನ<br>12-30 ಗಂಟೆಗೆ | ಸಮ್ಮೇಳನ ಸಭಾಂಗಣ,<br>ಕೊಠಡಿ ಸಂಖ್ಯೆ 334,<br>ಮೂರನೇ ಮಹಡಿ,<br>ವಿಧಾನಸೌಧ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ದಿವಂಗತ ದೇವರಾಜ ಅರಸುರವರ 101ನೇ ಜನ್ಮ ದಿನಾಚರಣೆ

ಬೆಂಗಳೂರು, ಆಗಸ್ಟ್ 17 (ಕರ್ನಾಟಕ ವಾರ್ತೆ)

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ದಿವಂಗತ ದೇವರಾಜ ಅರಸು ಜನ್ಮ ಶತಮಾನೋತ್ಸವ ಸಮಿತಿಯ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 20 ರಂದು ಬೆಳಿಗ್ಗೆ 11-00

ಗಂಟೆಗೆ ನಗರದ ಕಂಠೀರವ ಒಳಾಂಗಣ ಕ್ರೀಡಾಂಗಣ, ಬೆಂಗಳೂರು ಇಲ್ಲಿ ದಿವಂಗತ ದೇವರಾಜ ಅರಸುರವರ 101ನೇ ಜನ್ಮ ದಿನಾಚರಣೆ ಹಾಗೂ ಜನ್ಮ ಶತಮಾನೋತ್ಸವ ಸಮಾರೋಪ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ

ಅಂದು ಬೆಳಿಗ್ಗೆ 10.40 ಗಂಟೆಗೆ ವಿಧಾನಸೌಧದ ಪಶ್ಚಿಮ ದ್ವಾರದಲ್ಲಿರುವ ದಿವಂಗತ ಡಿ. ದೇವರಾಜ ಅರಸು ಅವರ ಪ್ರತಿಮೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೇರಿದಂತೆ ಅನೇಕ ಗಣ್ಯರು ಮಾಲಾರ್ಪಣೆ ಮಾಡಲಿದ್ದಾರೆ.

ಈ ಸಮಾರಂಭವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದಾರೆ. ಸಮಾರಂಭದ ಅಧ್ಯಕ್ಷತೆಯನ್ನು ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಹೆಚ್. ಆಂಜನೇಯ ಅವರು ವಹಿಸುವರು.

ಸಮಾರಂಭದಲ್ಲಿ ಕೇಂದ್ರದ ಸಚಿವರು, ರಾಜ್ಯ ಸಚಿವರು ವಿಧಾನಸಭೆ ಅಧ್ಯಕ್ಷರು, ಕರ್ನಾಟಕ ವಿಧಾನ ಪರಿಷತ್ ಸಭಾಪತಿಯವರು ಸೇರಿದಂತೆ ವಿಧಾನಸಭೆ ಸದಸ್ಯರು, ವಿಧಾನ ಪರಿಷತ್ ಸದಸ್ಯರು, ಲೋಕಸಭೆ ಹಾಗೂ ರಾಜಸಭಾ ಸದಸ್ಯರು ಸೇರಿದಂತೆ ಅನೇಕ ಗಣ್ಯರು ಪಾಲ್ಗೊಳ್ಳುವರು.

ಬಾಬು:ಜಿಪಿಆರ್

# ಅನುಪಾಲನಾ ಗೃಹ ಆರಂಭಿಸಲು ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 17 (ಕರ್ನಾಟಕ ವಾರ್ತೆ)

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ 2016-17 ನೇ ಸಾಲಿನಲ್ಲಿ 18 ವರ್ಷಕ್ಕಿಂತ ಮೇಲ್ಪಟ್ಟ ನಿರಾಶ್ರಿತ ಬುದ್ದಿಮಾಂದ್ಯ ಪುರುಷ ಹಾಗೂ ಕಾಳಜಿ ವಹಿಸುವುದಕ್ಕಾಗಿ ಮತ್ತು ಸಂರಕ್ಷಣೆಗಾಗಿ ಮೈಸೂರು, ಕಲಬುರಗಿ ಹಾಗೂ ಬೆಳಗಾವಿ ವಿಭಾಗದ ಯಾವುದೇ ಜಿಲ್ಲೆಯಲ್ಲಿ ಅನುಪಾಲನಾ ಗೃಹಗಳನ್ನು ಪ್ರಾರಂಭಿಸಲು ಸ್ವಯಂಸೇವಾ ಸಂಸ್ಥೆಗಳಿಂದ ಆಸಕ್ತಿ ಕೋರಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಆಗಸ್ಟ್ 25 ರೊಳಗೆ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಪೋಡಿಯಂ ಬ್ಲಾಕ್, ವಿ.ವಿ. ಕೇಂದ್ರ, ನೆಲಮಹಡಿ, ಬೆಂಗಳೂರು – 560 001 ಇವರಿಗೆ ಸಲ್ಲಿಸಬೇಕು.

ಅರ್ಜಿ ನಮೂನೆ ಹಾಗೂ ಹೆಚ್ಚಿನ ವಿವರಗಳಿಗೆ ನಿರ್ದೇಶನಾಲಯ, ವಿಕಲಚೇತನರ ಹಾಗೂ ಹಿರಿಯ ನಾಗರಿಕ ರ ಸಬಲೀಕರಣ ಇಲಾಖೆ, ಬೆಂಗಳೂರು ಇವರಿಂದ

ದೂರವಾಣಿ ಸಂಖ್ಯೆ 080–22860907/22866046 ಹಾಗೂ ಇಲಾಖೆಯ ವೆಬ್‌ಸೈಟ್ **welfareofdisabled.kar.nic.in** ರಲ್ಲಿ ಸಂಪರ್ಕಿಸಿ ಪಡೆಯಬಹುದಾಗಿದೆ.

ಬಾಬು:ಜಿಪಿಆರ್.